"Azadi Ka Amrit Mahotsav"
INDIA@75

# ಕೃಷಿ ವಿಶ್ವ ವಿದ್ಯಾನಿಲಯ
## ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು-560065

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 01.10.2021

### ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

(ದಿನಾಂಕ **02-10-2021** ರಿಂದ **06-10-2021**ವರೆಗೆ)

| ನಿಯತಾಂಕಗಳು | 02.10.2021 | 03.10.2021 | 04.10.2021 | 05.10.2021 | 06.10.2021 |
|---|---|---|---|---|---|
| ಮಳೆ (ಮಿ ಮಿ) | 6 | 19 | 7 | 16 | 19 |
| ಗರಿಷ್ಠ ಉಷ್ಣಾಂಶ ◦(ಡಿ.ಸೆ. ) | 29 | 28 | 28 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 20 | 21 | 21 |
| ಮೋಡ (ಪ್ರಮಾಣ) | 4 | 6 | 4 | 4 | 5 |
| ಅರ್ದ್ರತೆ 7.20 ಬೆ (ಶೇ) | 87 | 87 | 87 | 89 | 89 |
| ಅರ್ದ್ರತೆ 2.20 ಮ (ಶೇ) | 68 | 68 | 68 | 70 | 70 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 4 | 3 | 3 | 3 | 3 |
| ಗಾಳಿಯ ದಿಕ್ಕು ( ಡಿಗ್ರಿ) | 120 | 122 | 124 | 112 | 90 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0-29.0$^o$C** ಮತ್ತು ಕನಿಷ್ಠ **20.0$^o$C -21.0$^o$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **87-89 %** ಇದ್ದು ಮಧ್ಯಾಹ್ನ **68-70 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **3-4** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

**"ಹಸ್ತಕ್ಕೆ ಹದ, ಚಿತ್ತಕ್ಕೆ ಬೆಳೆ !"**

- ಹಸ್ತ ಮಳೆಯು ಕಾಲವು ಸೆಪ್ಟೆಂಬರ್ ತಿಂಗಳ 27 ರಿಂದ ಅಕ್ಟೋಬರ್ ತಿಂಗಳ 10 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 105.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯ ಮುನ್ಸೂಚನೆ ಇದೆ, ತದನಂತರ ದೀರ್ಘಾವಧಿ ಹವಾಮಾನ ಮುನ್ಸೂಚನೆಯ ಪ್ರಕಾರ ಸೆಪ್ಟೆಂಬರ್ ನಾಲ್ಕನೇ ಮತ್ತು ಅಕ್ಟೋಬರ್ ತಿಂಗಳ ಮೊದಲನೇ ವಾರದ ವರೆಗೂ ಸರಾಸರಿಗಿಂತ ಕಡಿಮೆ ಮಳೆಯ ಸಾಧ್ಯತೆ ಇರುವುದರಿಂದ ತಡ ಮುಂಗಾರು ಬಿತ್ತನೆಯನ್ನು ಮುಂದೂಡಿ.<br>➢ ಜುಲೈ ತಿಂಗಳ ಎರಡನೇ ವಾರ ಮತ್ತು ಆಗಸ್ಟ್ ತಿಂಗಳ ಮೊದಲ ವಾರದಲ್ಲಿ ಬಿತ್ತನೆ ಮಾಡಿರುವ ರಾಗಿ ಬೆಳೆಯಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>➢ ರಾಗಿ ಬೆಳೆಗೆ ಶಿಫಾರಿಸ್ಸಿದ ಯೂರಿಯಾ ಗೊಬ್ಬರವನ್ನು ಕೊಡಿ.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br><br>**ಎರಡುಬೆಳೆ ಪದ್ದತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ಮೇ ತಿಂಗಳಲ್ಲಿ ಬಿತ್ತಿದ ಪೂರ್ವ ಮುಂಗಾರು ಬೆಳೆಗಳನ್ನು ಕಟಾವು ಮಾಡಿ ತಕ್ಷಣ ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್,ಆರ್-301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್-365, ಜಿ.ಪಿ.ಯು-26, 45 & 48 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1, ಅವರೆ-ಎಚ್.ಎ-3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್-1,41,42,44 |

| | |
|---|---|
| | ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಆಗಸ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.